21

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 9-12-2020

# ಸದಸ್ಯರ ಗೈರಿಗೆ ಸ್ಪೀಕರ್ ಅಸಮಾಧಾನ

ಬೆಂಗಳೂರು: ವಿಧಾನಸಭೆಯಲ್ಲಿ ಪ್ರಶ್ನೋತ್ತರ ಕಲಾಪ ಮುಗಿದ ನಂತರ ನಿಲುವಳಿ ಸೂಚನೆ ಮಂಡನೆಗೆ ಪ್ರಸ್ತಾಪ ಸಲ್ಲಿಸಿದ್ದ ಸದಸ್ಯರ ಹೆಸರು ಕೂಗಿದರೂ ಯಾರೂ ಸದನದಲ್ಲಿ ಹಾಜರಿಲ್ಲದ ಬಗ್ಗೆ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅಸಮಾಧಾನ ವ್ಯಕ್ತಪಡಿಸಿದರು.

ಬಿಜೆಪಿ ಸದಸ್ಯ ಪಿ.ರಾಜೀವ್ ನೇತೃತ್ವದಲ್ಲಿ ನಿಲುವಳಿ ಸೂಚನೆಗೆ ಮನವಿ ಸಲ್ಲಿಸಲಾಗಿತ್ತು. ಜೆಡಿಎಸ್ ಸದಸ್ಯ ಶಿವಲಿಂಗೇಗೌಡರ ನೇತೃತ್ವದಲ್ಲಿ ಒಂದು ನಿಲುವಳಿ ಸೂಚನೆಗೆ ಮನವಿ ಸಲ್ಲಿಕೆಯಾಗಿತ್ತು. ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ಅವರು ಬೆಂಬಲ ಬೆಲೆ ಯೋಜನೆ ಕುರಿತು ನಿಲುವಳಿ ಸೂಚನೆ ಮಂಡಿಸಿದ್ದರು.

ಸಿದ್ದರಾಮಯ್ಯ ಸದನದಲ್ಲಿ ಹಾಜರಿದ್ದರೂ, ಬೇರೆ ಕಲಾಪ ಚರ್ಚಿಸಿದ ನಂತರ ತಮ್ಮ ನಿಲುವಳಿ ಸೂಚನೆಗೆ ಅವಕಾಶ ನೀಡುವುದಾಗಿ ಸ್ಪೀಕರ್ ಹೇಳಿ, ಉಳಿದ ಸದಸ್ಯರ ಹೆಸರು ಕೂಗಿದರೂ ಯಾರೂ ಸದನದಲ್ಲಿ ಹಾಜರಿಲ್ಲದಿ ರುವುದಕ್ಕೆ ಬೇಸರ ವ್ಯಕ್ತಪಡಿಸಿದರು. ಅವರ ಮಾತಿಗೆ ಧ್ವನಿಗೂಡಿಸಿದ ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ಇದು ಸದಸ್ಯರ ಬೇಜವಾಬ್ದಾರಿ ಎಂದು ಹೇಳಿದರು.

ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ.ಮಾಧುಸ್ವಾಮಿ, ಸದಸ್ಯರ ಗೈರು ಹಾಜರಿಗೆ ಅಸಮಾಧಾನ ವ್ಯಕ್ತಪಡಿಸಿ ನಿಲುವಳಿ ಸೂಚನೆಗೆ ನೋಟಿಸ್ ಕೊಟ್ಟು ಸದನಕ್ಕೆ ಗೈರಾಗುವ ಸದಸ್ಯರಿಗೆ ಮತ್ತೊಮ್ಮೆ ನಿಲುವಳಿಗೆ ಅವಕಾಶ ಕಲ್ಪಿಸಬೇಡಿ ಎಂದು ಹೇಳಿದರು.

ಉದಯವಾಣಿ 9/12/20